ಕರ್ನಾಟಕ ಸರ್ಕಾರ

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗರಸ್ತೆ, ಬೆಂಗಳೂರು**

**ಸಂಖ್ಯೆ: ಸಿ1(5)ಸ್ಥಾಪಬಡಿ/6/2021-22** **ದಿನಾಂಕ: 06/01/2022**

## ಅಧಿಸೂಚನೆ

**ವಿಷಯ** : ಸರ್ಕಾರಿ ಪ್ರೌಡ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

**ಉಲ್ಲೇಖ:** 1. ಸರ್ಕಾರದ ಪತ್ರ ಸಂಖ್ಯೆ ಇಡಿ 57 ಎಲ್‌ಬಿಪಿ 2014 ದಿನಾಂಕ:20.05.2014.
2. ನಿರ್ದೇಶಕರು [ಪ್ರೌಢ ಶಿಕ್ಷಣ] ರವರು ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಿರುವ ದಿನಾಂಕ:06.02.2020 ಹಾಗೂ17/08/2020

***************

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಹಾಗೂ ಮೈಸೂರು ವಿಭಾಗದಲ್ಲಿನ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಗ್ರೂಪ್-ಬಿ ಖಾಲಿ ಹುದ್ದೆಗಳಿಗೆ ಸ್ಥಾನಪನ್ನಾ ಬಡ್ತಿ ನೀಡಲು ಉದ್ದೇಶಿಸಲಾಗಿದೆ. ಉಲ್ಲೇಖ-2ರಂತೆ ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್-2 ಪ್ರೌಢ ಶಾಲಾ ಸಹ ಶಿಕ್ಷಕರ ಅಂತಿಮ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ-1ರ ಸರ್ಕಾರದ ನಿರ್ದೇಶನದಂತೆ ದಿನಾಂಕ:06.02.2020 ಹಾಗೂ 17/08/2020 ಪಟ್ಟಿಯನ್ನು ಸಿದ್ದಪಡಿಸಿ ಪ್ರಕಟಿಸಲಾಗಿದೆ.

ಪ್ರಕಟಿಸಿರುವ ಜೇಷ್ಠತಾ ಪಟ್ಟಿಯನ್ನು ಅನುಸರಿಸಿ ಬೆಂಗಳೂರು/ಮೈಸೂರು ವಿಭಾಗದಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಈ ಪತ್ರದೊಂದಿಗೆ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಿಗೆ ಬಡ್ತಿ ನೀಡಬಹುದಾದ ತಾತ್ಕಾಲಿಕ ಆಧ್ಯತಾ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್ **www.schooleducation.kar.nic.in** ನಲ್ಲಿ ಪ್ರಕಟಿಸಲಾಗುವುದು.

ಇದರೊಂದಿಗೆ ಲಗತ್ತಿಸಿರುವ ಪಟ್ಟಿಯಲ್ಲಿರುವ ಶಿಕ್ಷಕರ ಮಾಹಿತಿಯನ್ನು ಪಡೆಯಲು **ಚೆಕ್‌ಲಿಸ್ಟ್ ನಲ್ಲಿ ಸಲ್ಲಿಸಲು ತಿಳಿಸಿದೆ.**

1. ಹೆಚ್.ಆರ್.ಎಂ.ಎಸ್ ನಲ್ಲಿ ವೇತನ ಸೆಳೆಯುವ ಕೆ.ಜಿ.ಐ.ಡಿ ಸಂಖ್ಯೆಯನ್ನೇ ಕಡ್ಡಾಯವಾಗಿ ಕಾಲಂ-2ರಲ್ಲಿ ನಮೂದಿಸಬೇಕು. [ಒಂದು ವೇಳೆ ಹೆಚ್.ಆರ್.ಎಂ.ಎಸ್ ನಲ್ಲಿ ವೇತನ ಸೆಳೆಯುವ ಕೆ.ಜಿ.ಐ.ಡಿ ಸಂಖ್ಯೆ ಹಾಗೂ ಶಿಕ್ಷಕರ ಸೇವಾ ತಂತ್ರಾಂಶದಲ್ಲಿ [ಇಇಡಿಎಸ್] ನಮೂದಿಸಿರುವ ಕೆ.ಜಿ.ಐ.ಡಿ ಸಂಖ್ಯೆ ವ್ಯತ್ಯಾಸವಾಗಿದ್ದಲ್ಲಿ ಅಂತಹ ಪ್ರಕರಣಗಳಿಗೆ ಸಂಬಂಧ ಪಟ್ಟ ಉಪನಿರ್ದೇಶಕರೇ ನೇರ ಹೊಣೆಗಾರರಾಗಿರುತ್ತಾರೆ.]
2. ಈ ಪಟ್ಟಿಯಲ್ಲಿನ ಶಿಕ್ಷಕರ ಮಾಹಿತಿಯು ಶಿಕ್ಷಕರ ಸೇವಾ ತಂತ್ರಾಂಶದಲ್ಲಿ[ಇಇಡಿಎಸ್] ಕಡ್ಡಾಯವಾಗಿ ನಮೂದಾಗಿರುವ ಬಗ್ಗೆ ಮಾಹಿತಿ ಸಲ್ಲಿಸುವುದು.
3. ಬಡ್ತಿ ಸಂಬಂಧ ಪ್ರಕಟಿಸಲಾಗಿರುವ ತಾತ್ಕಲಿಕ ಪಟ್ಟಿಯಲ್ಲಿನ ಎಲ್ಲಾ ಪ್ರೌಢ ಶಾಲಾ ಸಹ ಶಿಕ್ಷಕರುಗಳ ಬಗ್ಗೆ **ಶಿಸ್ತಿನ ಕ್ರಮ/ ಇಲಾಖಾ ವಿಚಾರಣೆ/ನ್ಯಾಯಾಲಯದಲ್ಲಿ ಬಾಕಿ ಇರುವ ಬಗ್ಗೆ ಸಂಬಂದಿಸಿದ ಉಪನಿರ್ದೇಶಕರು ಧೃಢೀಕರಣವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.**

ಮೇಲ್ಕಂಡ ವಿವರಗಳನ್ನು ಲಗ್ತಿತ್ತಿಸಿರುವ ಚೆಕ್ ಲಿಸ್ಟನಲ್ಲಿ ಮಾಹಿತಿಯನ್ನು ನಮೂದಿಸಿದ ಪ್ರಸ್ತಾವನೆಯನ್ನು ಸಂಬಂದಿಸಿದ ಶಿಕ್ಷಕರುಗಳಿಂದ ಪಡೆದು ಜಿಲ್ಲಾವಾರು ಕ್ರೋಢೀಕರಿಸಿ, ಪ್ರತಿ ಶಿಕ್ಷಕರ ಬಡ್ತಿ ಪ್ರಸ್ತಾವನೆಯನ್ನು ಪ್ರತ್ಯೇಕ ಡೋಸಿಯರ್‌ಗಳಲ್ಲಿ ಸಿದ್ದಪಡಿಸಿ ಉಪನಿರ್ದೇಶಕರು (ಆಡಳಿತ) ದೃಢೀಕರಣದೊಂದಿಗೆ ಈ ಕಛೇರಿಗೆ **ದಿನಾಂಕ: 18/01/2022 ರೊಳಗಾಗಿ ಕಡ್ಡಾಯವಾಗಿ ಮದ್ದಾಂ ಸಲ್ಲಿಸತಕ್ಕದ್ದು.**

ಡಾ.ರೂಪಶ್ರೀ ಎಸ್ ಕೆ.ಎ.ಎಸ್.,
ಜಂಟಿ ನಿರ್ದೇಶಕರು (ಆಡಳಿತ)
6/1/22

**ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಗ್ರೂಪ್-ಬಿ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಚೆಕ್ ಲಿಸ್ಟ್**

| ಕ್ರಮ ಸಂಖ್ಯೆ | ಸೇವಾ ವಿವರದ ಚೆಕ್ ಲಿಸ್ಟ್ | ವಿವರಣೆ |
|---|---|---|
| 1 | ಜೇಷ್ಠತಾ ಸಂಖ್ಯೆ | |
| 2 | ಕೆ.ಜಿ.ಐ.ಡಿ ಸಂಖ್ಯೆ | |
| 3 | ಶಿಕ್ಷಕ/ಶಿಕ್ಷಕಿಯ ಹೆಸರು | |
| 4 | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಾಲೆಯ ಹೆಸರು ಮತ್ತು ವಿಳಾಸ | |
| 5 | ಸೇವೆಗೆ ಸೇರಿ ದಿನಾಂಕ | |
| 6 | 2016-17 ರಿಂದ 2020-21ರ ಕಾರ್ಯ ನಿರ್ವಹಣಾ ವರದಿ [ಅಂಗೀಕಾರ ಷರದೊಂದಿಗೆ ಸಲ್ಲಿಸುವುದು] ಅಥವಾ ಈ ಹಿಂದೆ ಸಲ್ಲಿಸಿದ್ದಲ್ಲಿ ಅದರ ಒಂದು ಪ್ರತಿ ಸಲ್ಲಿಸುವುದು. | |
| 7 | ಶಿಸ್ತಿನ ಕ್ರಮ/ನ್ಯಾಯಾಲಯದ/ಇಲಾಖಾ ವಿಚಾರಣೆ ಬಾಕಿ ಇರುವ ಬಗ್ಗೆ. | |
| 8 | ಕನ್ನಡ ಭಾಷಾ ಪರೀಕ್ಷೆ ತೇರ್ಗಡೆ ಪಡೆದ ದಾಖಲೆಗಳ ಪ್ರತಿ ಹಾಗೂ ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್, ಜನರಲ್ ಲಾ ಪಾರ್ಟ್-1 & 2 ಉತ್ತೀರ್ಣರಾದ ಪ್ರಮಾಣ ಪತ್ರ. | |
| 9 | ಹಿಂದಿ ಶಿಕ್ಷಕರಾದಲ್ಲಿ ಹಿಂದಿ ಶಿಕ್ಷಣ ಪಾರಂಗತ್, ಪಿ.ಯು.ಸಿ ತೇರ್ಗಡೆ ಹೊಂದಿರುವ ಹಾಗೂ ಬಿ.ಇಡಿ ಪದವಿಯ ಧೃಢೀಕರಣ ಪ್ರಮಾಣ ಪತ್ರಗಳು | |

[ಸಹಿ]
[ಕ್ಷೇತ್ರ ಶಿಕ್ಷಣಾಧಿಕಾರಿಗಳು]

[ಸಹಿ]
ಉಪನಿರ್ದೇಶಕರು[ಆಡಳಿತ]

**ಇವರಿಗೆ,**

ಬೆಂಗಳೂರು/ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ )(ಅಭಿವೃದ್ಧಿ)

**ಪ್ರತಿಯನ್ನು:-**

1. ರಾಜ್ಯ ಯೋಜನಾ ನಿರ್ದೇಶಕರು, ಎಸ್.ಎಸ್.ಎ/ಆರ್.ಎಂ.ಎಸ್.ಎ, ನೃಪತುಂಗ ರಸ್ತೆ, ಬೆಂಗಳೂರು.
2. ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.
3. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬನಶಂಕರಿ 3ನೇ ಹಂತ,ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಪಠ್ಯಪುಸ್ತಕ ಸಂಘ, ಹೊಸಕೆರೆಹಳ್ಳಿ, ಬನಶಂಕರಿ 3ನೇ ಹಂತ,ಬೆಂಗಳೂರು.
5. ನಿರ್ದೇಶಕರು(ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಬೆಂಗಳೂರು.
6. ನಿರ್ದೇಶಕರು, ಭಾಷಾ ಅಲ್ಪಸಂಖ್ಯಾತ ನಿರ್ದೇಶನಾಲಯ, ಆಯುಕ್ತರ ಕಛೇರಿ, ಬೆಂಗಳೂರು.
7. ನಿರ್ದೇಶಕರು(ಪ್ರಾ.ಶಿ) ಆಯುಕ್ತರ ಕಛೇರಿ, ಬೆಂಗಳೂರು.
8. ಸಹ ನಿರ್ದೇಶಕರು ಬೆಂಗಳೂರು/ಮೈಸೂರು ವಿಭಾಗ
9. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
10. ಬೆಂಗಳೂರು/ಮೈಸೂರು ವಿಭಾಗದ ಉಪನಿರ್ದೇಶಕರು(ಆಡಳಿತ) (ಅಭಿವೃದ್ಧಿ).
11. ಉಪನಿರ್ದೇಶಕರು, ಕೆ.ಎಸ್.ಕ್ಯೂ.ಎ, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ,6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.
12. ಹಿರಿಯ ಸಹಾಯಕ ನಿರ್ದೇಶಕರು ಇ-ಆಡಳಿತ ಶಾಖೆ ರವರಿಗೆ ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
13. ಕಛೇರಿ ಪ್ರತಿ.